**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

ಸಿ.ಸಿ. 32/2023

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.08**

**ದಿನಾಂಕಃ** 22.01.2026 **ಸಿಡಬ್ಲ್ಯೂ.17**

| | |
|---|---|
| ಹೆಸರು | ಅಬ್ದುಲ್ ಖಾದರ್ ಜಿಲಾನಿ |
| ತಂದೆ ಹೆಸರು | ಮಹಬೂಬ್ ಸಾಬ್ |
| ವಯಸ್ಸು | 56 ವರ್ಷ |
| ಉದ್ಯೋಗ | ಪಿ ಎಸ್ ಐ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸನ್ 2022 ರಿಂದ 2023 ರವರೆಗೆ ಪಿ ಎಸ್ ಐ ಆಗಿ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 10.06.2022 ರಂದು ಚಾಸಾ.14 ರವರಿಂದ ಕಡತವನ್ನು ಸ್ವೀಕರಿಸಿ ಚಾಸಾ.1,4 ರಿಂದ 6 ರವರ ಮರುಹೇಳಿಕೆ ಪಡೆದುಕೊಂಡಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಪರಿಶೀಲಿಸಿ ಆರೋಪಿತರ ವಿರುದ್ಧ ಆರೋಪ ಸಾಬೀತಾಗಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಚಾಸಾ.1 ಮತ್ತು 4 ರಿಂದ 6 ರವರಿಗೆ ಅವರ ಮರುಹೇಳಿಕೆ ಪಡೆಯಲು ನೋಟಿಸ್ ನೀಡಿಲ್ಲ. ಸದರಿಯವರಿಗೆ ನೋಟಿಸ ನೀಡಲು ತೊಂದರೆ ಇರಲಿಲ್ಲ ಎಂದರೆ ಸರಿ. ಸದರಿಯವರು ತಮ್ಮ ಮರುಹೇಳಿಕೆಯಲ್ಲಿ ಯಾವ ಯಾವ ಆರೋಪಿತರು ಎಣ್ಣೆ ಪ್ಯಾಕೆಟಗಳನ್ನು ಮಾರಾಟ ಮಾಡಿರುತ್ತಾರೆ ಹಾಗೂ ಯಾರು ಯಾರು ಎಷ್ಟು ಹಣ ಪಡೆದಿರುತ್ತಾರೆ ಎಂದು ಹೇಳಿಲ್ಲ ಎಂದರೆ ಸರಿ. ಈ ವಿಚಾರವನ್ನು ನಾವು ಚಾಸಾ.1 ಮತ್ತು 4 ರಿಂದ 6 ರವರಿಗೆ ಹೇಳಿಲ್ಲ ಎಂದರೆ ಸರಿ. ಆರೋಪಿತರು ಯಾವುದೇ ತಪ್ಪು ಮಾಡದಿದ್ದರೂ ಸಹ ದಾಖಲೆಗಳನ್ನು ಸೃಷ್ಟಿಸಿ ಅವರ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ